**All India Radio: Bangalore**
**National Bulletin In Kannada**
**18.12.2025 19.35 p.m.**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**18.12.2025 19.35 p.m.**
*******************

ಮುಖ್ಯಾಂಶಗಳು

೧. ಪರಮಾಣು ಶಕ್ತಿಯ ಸುಸ್ಥಿರ ಬಳಕೆ ಮತ್ತು ಪ್ರಗತಿ ಮಸೂದೆ ೨೦೨೫ಕ್ಕೆ ಸಂಸತ್ತಿನ ಉಭಯ ಸದನಗಳಲ್ಲಿ ಅಂಗೀಕಾರ

೨. ಪ್ರಧಾನಿ ನರೇಂದ್ರ ಮೋದಿ ಅವರಿಗೆ ಆರ್ಡರ್ ಆಫ್ ಓಮನ್ ಪ್ರಶಸ್ತಿ

೩. ಪ್ರಸಕ್ತ ಸಾಲಿನಲ್ಲಿ ೯ ಲಕ್ಷ ೫೨ ಸಾವಿರ ಕೋಟಿ ರೂಪಾಯಿ ಮೌಲ್ಯದ ಎಂಎಸ್ಎಂಇ ಉತ್ಪನ್ನಗಳ ರಫ್ತು - ಸಚಿವೆ ಶೋಭಾ ಕರಂದ್ಲಾಜೆ

೪. ಟಿ-೨೦ ಕ್ರಿಕೆಟ್; ನಾಳೆ ಅಹಮದಾಬಾದ್‌ನಲ್ಲಿ ಭಾರತ ಮತ್ತು ದಕ್ಷಿಣ ಆಫ್ರಿಕಾ ಅಂತಿಮ ಪಂದ್ಯ

***************

ಭಾರತ ಪರಿವರ್ತನೆಗೆ ಪರಮಾಣು ಶಕ್ತಿಯ ಸುಸ್ಥಿರ ಬಳಕೆ ಮತ್ತು ಪ್ರಗತಿ ಮಸೂದೆ ೨೦೨೫ ಅನ್ನು ರಾಜ್ಯಸಭೆ ಇಂದು ಅಂಗೀಕರಿಸಿದೆ. ಲೋಕಸಭೆ ನಿನ್ನೆ ಈ ಶಾಸನವನ್ನು ಅಂಗೀಕರಿಸಿತ್ತು.

ಇದು ೧೯೬೨ ರ ಪರಮಾಣು ಶಕ್ತಿ ಕಾಯ್ದೆ ಮತ್ತು ೨೦೧೦ ರ ಪರಮಾಣು ಹಾನಿಗೆ ನಾಗರಿಕ ಹೊಣೆಗಾರಿಕೆ ಕಾಯ್ದೆಯನ್ನು ಬದಲಾಯಿಸುತ್ತದೆ. ಜನರ ಕಲ್ಯಾಣಕ್ಕಾಗಿ ಪರಮಾಣು ವಿದ್ಯುತ್ ಉತ್ಪಾದನೆಗೆ ಪರಮಾಣು ಶಕ್ತಿ ಮತ್ತು ಅಯಾನೀಕರಿಸುವ ವಿಕಿರಣದ ಅಭಿವೃದ್ಧಿಯನ್ನು ಗುರಿಯಾಗಿರಿಸಿಕೊಂಡ ಶಾಸನ ಇದಾಗಿದೆ. ಅದರ ಸುರಕ್ಷಿತ ಬಳಕೆಗಾಗಿ ಇದು ದೃಢವಾದ ನಿಯಂತ್ರಕ ಚೌಕಟ್ಟನ್ನು ಒದಗಿಸಲು ಸಹ ಪ್ರಯತ್ನಿಸುತ್ತದೆ.

ಪರಮಾಣು ಶಕ್ತಿ ನಿಯಂತ್ರಣ ಮಂಡಳಿ ಮತ್ತು ಪರಮಾಣು ಶಕ್ತಿ ಪರಿಹಾರ ಸಲಹಾ ಮಂಡಳಿಯನ್ನು ಸ್ಥಾಪಿಸಲು ಮಸೂದೆ ಪ್ರಯತ್ನಿಸುತ್ತದೆ. ಪರಮಾಣು ವಿಘಟನೆಯ ಸಂದರ್ಭದಲ್ಲಿ ಕೇಂದ್ರ ಸರ್ಕಾರದ ಹೊಣೆಗಾರಿಕೆಯನ್ನು ಸಹ ಮಸೂದೆ ಒದಗಿಸುತ್ತದೆ. ಮಸೂದೆಯ ಅಡಿಯಲ್ಲಿ ತನ್ನ ಹೊಣೆಗಾರಿಕೆಯನ್ನು ಪೂರೈಸುವ ಉದ್ದೇಶಕ್ಕಾಗಿ ಕೇಂದ್ರ ಸರ್ಕಾರವು ಪರಮಾಣು ಹೊಣೆಗಾರಿಕೆ ನಿಧಿಯನ್ನು ಸ್ಥಾಪಿಸಿದೆ. ಶಾಸನವು ಯಾವುದೇ ವಿಕಿರಣಶೀಲ ವಸ್ತುಗಳ ತಯಾರಿಕೆ, ಬಳಕೆ, ರಫ್ತು, ಆಮದು, ಸಾಗಣೆ, ವರ್ಗಾವಣೆ ಮತ್ತು ವಿಕಿರಣ ಉತ್ಪಾದಿಸುವ ಉಪಕರಣಗಳನ್ನು ನಿಯಂತ್ರಿಸಲು ಅನುವು ಮಾಡಿಕೊಡುತ್ತದೆ. ಈ ಮಸೂದೆಯು ಯುರೇನಿಯಂ ಅಥವಾ ಥೋರಿಯಂ ಶೋಧನೆಗಾಗಿ ಪರಿಶೋಧನಾ ಚಟುವಟಿಕೆಗಳನ್ನು ಕೈಗೊಳ್ಳಲು ಕೇಂದ್ರ ಸರ್ಕಾರಕ್ಕೆ ಅಧಿಕಾರ ನೀಡುತ್ತದೆ.

***************

ಓಮನ್ ಸುಲ್ತಾನ್ ಸುಲ್ತಾನ್ ಹೈತಮ್ ಬಿನ್ ತಾರಿಕ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ 'ಆರ್ಡರ್ ಆಫ್ ಓಮನ್' ಪ್ರಶಸ್ತಿಯನ್ನು ಇಂದು ಪ್ರದಾನ ಮಾಡಿದ್ದಾರೆ.

ಮಸ್ಕತ್‌ನ ರಾಯಲ್ ಪ್ಯಾಲೇಸ್‌ನಲ್ಲಿ ನಡೆದ ಸಮಾರಂಭದಲ್ಲಿ ಭಾರತ-ಓಮನ್ ಸಂಬಂಧಗಳಿಗೆ ಮತ್ತು ಅವರ ದೂರದೃಷ್ಟಿಯ ನಾಯಕತ್ವದ ಮೂಲಕ ನೀಡಿದ ಅಸಾಧಾರಣ ಕೊಡುಗೆಗಾಗಿ ಈ ಪ್ರಶಸ್ತಿ ನೀಡಲಾಗಿದೆ.

ಇದಕ್ಕೂ ಮೊದಲು, ಓಮನ್ ಸುಲ್ತಾನ್ ಮತ್ತು ಪ್ರಧಾನ ಮಂತ್ರಿಯವರ ಸಮ್ಮುಖದಲ್ಲಿ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದಕ್ಕೆ ಸಹಿ ಹಾಕುವ ಮೂಲಕ ಭಾರತ ಮತ್ತು ಓಮನ್ ತಮ್ಮ ದ್ವಿಪಕ್ಷೀಯ ಆರ್ಥಿಕ ಸಂಬಂಧಗಳಲ್ಲಿ ಮಹತ್ವದ ಮೈಲಿಗಲ್ಲನ್ನು ಗುರುತಿಸಿವೆ. ಒಪ್ಪಂದಕ್ಕೆ ಸಹಿ ಹಾಕುವುದನ್ನು ಇಬ್ಬರೂ ಉನ್ನತ ನಾಯಕರು ಸ್ವಾಗತಿಸಿದರು.

***************

ಪ್ರಸಕ್ತ ಸಾಲಿನಲ್ಲಿ ಸೆಪ್ಟೆಂಬರ್ ಅಂತ್ಯದ ವೇಳೆಗೆ ಒಂಬತ್ತು ಲಕ್ಷ ೫೨ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಮೌಲ್ಯದ ಎಂಎಸ್ಎಂಇ ಉತ್ಪನ್ನಗಳನ್ನು ರಫ್ತು ಮಾಡಲಾಗಿದೆ ಎಂದು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಲೋಕಸಭೆಯಲ್ಲಿ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಭಾರತದ ರಫ್ತು ಕಾರ್ಯಕ್ಷಮತೆಯು ಎಲೆಕ್ಟ್ರಾನಿಕ್ ಸರಕುಗಳು, ಔಷಧಗಳು ಮತ್ತು ಎಂಜಿನಿಯರಿಂಗ್ ಸರಕುಗಳಂತಹ ಪ್ರಮುಖ ಹೆಚ್ಚಿನ ಮೌಲ್ಯ ಮತ್ತು ತಂತ್ರಜ್ಞಾನ ಆಧಾರಿತ ವಲಯಗಳ ಅಭಿವೃದ್ಧಿಯನ್ನು ಪ್ರತಿಬಿಂಬಿಸುತ್ತದೆ. ಒಟ್ಟಾರೆ ರಫ್ತು ಪರಿಸರ ವ್ಯವಸ್ಥೆಯನ್ನು ಬಲಪಡಿಸಲು ಸಮಗ್ರ ಚೌಕಟ್ಟಾಗಿ ರಫ್ತು ಉತ್ತೇಜನ ಮಿಷನ್ ಅನ್ನು ಸರ್ಕಾರ ಅನುಮೋದಿಸಿದೆ ಎಂದು ಅವರು ಹೇಳಿದರು.

ಕಡಿಮೆ ಜಿಎಸ್‌ಟಿ ದರಗಳು ಕಚ್ಚಾ ವಸ್ತುಗಳು ಮತ್ತು ಸೇವೆಗಳನ್ನು ಹೆಚ್ಚು ಕೈಗೆಟುಕುವಂತೆ ಮಾಡಿದ್ದು, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಮತ್ತು ನವೋದ್ಯಮಗಳು ಕಾರ್ಯಾಚರಣೆಗಳನ್ನು ಹೆಚ್ಚಿಸಲು, ನಾವೀನ್ಯತೆಯಲ್ಲಿ ಹೂಡಿಕೆ ಮಾಡಲು ಮತ್ತು ದೇಶೀಯವಾಗಿ ಮತ್ತು ಜಾಗತಿಕವಾಗಿ ಸ್ಪರ್ಧಿಸಲು ಪ್ರೇರೇಪಿಸುತ್ತಿವೆ ಎಂದು ಸಚಿವರು ಹೇಳಿದರು.

***************

ನವದೆಹಲಿಯಲ್ಲಿ ನಾಳೆ ನಡೆಯಲಿರುವ ಎರಡನೇ ವಿಶ್ವ ಆರೋಗ್ಯ ಸಂಸ್ಥೆಯ ಸಾಂಪ್ರದಾಯಿಕ ಔಷಧ ಜಾಗತಿಕ ಶೃಂಗಸಭೆಯ ಸಮಾರೋಪ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ.

ಈ ಸಂದರ್ಭದಲ್ಲಿ, ಆಯುಷ್ ವಲಯಕ್ಕೆ ಮಾಸ್ಟರ್ ಡಿಜಿಟಲ್ ಪೋರ್ಟಲ್ ಆದ ಮೈ ಆಯುಷ್ ಇಂಟಿಗ್ರೇಟೆಡ್ ಸರ್ವೀಸಸ್ ಪೋರ್ಟಲ್ ಸೇರಿದಂತೆ ಹಲವಾರು ಆಯುಷ್ ಉಪಕ್ರಮಗಳಿಗೆ ಚಾಲನೆ ನೀಡಲಿದ್ದಾರೆ.

***************

ಆಪರೇಷನ್ ಸಿಂಧೂರ್ ಭಾರತದ ಪ್ರಭಾವಿ ಅಲ್ಪಾವಧಿಯ ಕಾರ್ಯಾಚರಣೆಯ ಸಾಮರ್ಥ್ಯವನ್ನು ಪ್ರದರ್ಶಿಸಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ವಾಯುಪಡೆಯ ಕಮಾಂಡರ್‌ಗಳ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ಆಪರೇಷನ್ ಸಿಂಧೂರ್ ಸಮಯದಲ್ಲಿ ಪರಿಣಾಮಕಾರಿಯಾಗಿ ಬಳಸಲಾದ ಭಾರತದ ವಾಯು ರಕ್ಷಣಾ ವ್ಯವಸ್ಥೆ ಮತ್ತು ಇತರ ಉಪಕರಣಗಳ ಕಾರ್ಯಕ್ಷಮತೆಯನ್ನು ಶ್ಲಾಘಿಸಿದ ಅವರು, ಭವಿಷ್ಯದ ಪ್ರತಿಯೊಂದು ಸವಾಲಿಗೂ ಕಾರ್ಯಾಚರಣೆಯಿಂದ ಪಾಠಗಳನ್ನು ಕಲಿಯುವಂತೆ ಕಮಾಂಡರ್‌ಗಳನ್ನು ಒತ್ತಾಯಿಸಿದರು.

***************

ದೇಶದ ಒಟ್ಟು ಸ್ಥಾಪಿತ ವಿದ್ಯುತ್ ಸಾಮರ್ಥ್ಯವು ಇಲ್ಲಿಯವರೆಗೆ ಐದು ಲಕ್ಷ ಮೆಗಾವ್ಯಾಟ್‌ಗಳನ್ನು ತಲುಪಿದೆ ಎಂದು ಇಂಧನ ಖಾತೆ ರಾಜ್ಯ ಸಚಿವ ಶ್ರೀಪಾದ್ ನಾಯಕ್ ಹೇಳಿದ್ದಾರೆ.

ಇಂದು ಲೋಕಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರದಲ್ಲಿ ಅವರು, ಈ ಸ್ಥಾಪಿತ ಉತ್ಪಾದನಾ ಸಾಮರ್ಥ್ಯವು ಎರಡು ಲಕ್ಷ ೪೫ ಸಾವಿರ ಮೆಗಾವ್ಯಾಟ್ ಪಳೆಯುಳಿಕೆ-ಇಂಧನ ಮೂಲಗಳನ್ನು ಮತ್ತು ಸುಮಾರು ಎರಡು ಲಕ್ಷ ೬೦ ಸಾವಿರ ಮೆಗಾವ್ಯಾಟ್ ಪಳೆಯುಳಿಕೆ-ಅಲ್ಲದ ಇಂಧನ ಮೂಲಗಳನ್ನು ಒಳಗೊಂಡಿದೆ. ೨೦೩೦ರ ವೇಳೆಗೆ ೫೦೦ ಗಿಗಾವ್ಯಾಟ್ ಪಳೆಯುಳಿಕೆ-ಅಲ್ಲದ ಇಂಧನ ಸಾಮರ್ಥ್ಯದ ಬದ್ಧತೆಯನ್ನು ಸಾಕಾರಗೊಳಿಸಲು ದೇಶದಲ್ಲಿ ನವೀಕರಿಸಬಹುದಾದ ಇಂಧನ ಸಾಮರ್ಥ್ಯವನ್ನು ಉತ್ತೇಜಿಸಲು ಮತ್ತು ವೇಗಗೊಳಿಸಲು ಸರ್ಕಾರ ಹಲವಾರು ಉಪಕ್ರಮಗಳನ್ನು ತೆಗೆದುಕೊಂಡಿದೆ ಎಂದು ಅವರು ಹೇಳಿದರು.

***************

ಬಡವರನ್ನು ಸಬಲೀಕರಣಗೊಳಿಸುವ, ಹಳ್ಳಿಗಳು ಮತ್ತು ನಗರಗಳ ನಡುವಿನ ಅಂತರವನ್ನು ಕಡಿಮೆ ಮಾಡುವ ಕಲ್ಪನೆಯೊಂದಿಗೆ ವಿಕಸಿತ ಭಾರತ್ ಜಿ ರಾಮ್ ಜಿ ವಿಧೇಯಕವನ್ನು ಮಂಡಿಸಲಾಗುತ್ತಿದೆ ಎಂದು ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ಹೇಳಿದ್ದಾರೆ.

ವಿಧೇಯಕ ಮಂಡನೆ ಸಂದರ್ಭದಲ್ಲಿ ಮಾತನಾಡಿದ ಅವರು, ವಿರೋಧ ಪಕ್ಷಗಳಿಗೆ ತಮ್ಮ ಅಭಿಪ್ರಾಯಗಳನ್ನು ಮಂಡಿಸಲು ಸಾಕಷ್ಟು ಅವಕಾಶ ನೀಡಲಾಗಿದೆ. ಈ ಮಸೂದೆ ಅಂಗೀಕಾರದ ಸಮಯದಲ್ಲಿ ವಿರೋಧ ಪಕ್ಷಗಳು ವರ್ತಿಸಿದ ರೀತಿ ನಾಚಿಕೆಗೇಡಿನ ಸಂಗತಿ ಎಂದು ಅವರು ಹೇಳಿದರು.

***************

೨೦೨೯ ರ ವೇಳೆಗೆ ೩ ಲಕ್ಷ ಕೋಟಿ ರೂಪಾಯಿಗಳ ರಕ್ಷಣಾ ಉತ್ಪಾದನೆ ಮತ್ತು ೫೦ ಸಾವಿರ ಕೋಟಿ ರೂಪಾಯಿಗಳ ರಕ್ಷಣಾ ರಫ್ತು ಸಾಧಿಸುವ ಸ್ಪಷ್ಟ ದೃಷ್ಟಿಕೋನವನ್ನು ಸರ್ಕಾರ ಹೊಂದಿದೆ ಎಂದು ವಿದ್ಯುತ್ ಮತ್ತು ನವೀಕರಿಸಬಹುದಾದ ಇಂಧನ ಖಾತೆ ರಾಜ್ಯ ಸಚಿವ ಶ್ರೀಪಾದ ನಾಯಕ್ ಇಂದು ಹೇಳಿದ್ದಾರೆ.

ನವದೆಹಲಿಯಲ್ಲಿ ಮಾಧ್ಯಮಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ೨೦೨೪-೨೫ರಲ್ಲಿ ರಕ್ಷಣಾ ಉತ್ಪಾದನೆಯು ೧ ಕೋಟಿ ೫೪ ಲಕ್ಷ ರೂಪಾಯಿಗಳನ್ನು ತಲುಪಿದೆ. ಭಾರತ ಜಾಗತಿಕ ರಕ್ಷಣಾ ಉತ್ಪಾದನಾ ಕೇಂದ್ರವಾಗಿದ್ದು, ರಕ್ಷಣಾ ಪರಿಸರ ವ್ಯವಸ್ಥೆಯು ೧೬ ಸಾವಿರಕ್ಕೂ ಹೆಚ್ಚು ಎಂಎಸ್‌ಎಂಇಗಳನ್ನು ಒಳಗೊಂಡಿದೆ ಎಂದು ಅವರು ಹೇಳಿದರು.

ಗುಜರಾತ್‌ನಲ್ಲಿ ವಿಶ್ವದ ಅತಿ ಎತ್ತರದ ಪ್ರತಿಮೆ - ಏಕತಾ ಪ್ರತಿಮೆ - ವಿನ್ಯಾಸ ಮಾಡಿದ ಖ್ಯಾತ ಶಿಲ್ಪಿ ರಾಮ್ ವಂಜಿ ಸುತಾರ್ ಅವರು ನಿನ್ನೆ ತಡರಾತ್ರಿ ಉತ್ತರ ಪ್ರದೇಶದ ನೋಯ್ಡಾದ ತಮ್ಮ ನಿವಾಸದಲ್ಲಿ ವಯೋಸಹಜ ಕಾಯಿಲೆಗಳಿಂದ ನಿಧನರಾದರು. ಅವರಿಗೆ ೧೦೦ ವರ್ಷ ವಯಸ್ಸಾಗಿತ್ತು.

೧೯೨೫ ರಲ್ಲಿ ಇಂದಿನ ಮಹಾರಾಷ್ಟ್ರದ ಧುಲೆ ಜಿಲ್ಲೆಯಲ್ಲಿ ಜನಿಸಿದ ಸುತಾರ್ ಅವರು ಮುಂಬೈನ ಜೆ.ಜೆ. ಕಲಾ ಮತ್ತು ವಾಸ್ತುಶಿಲ್ಪ ಶಾಲೆಯಿಂದ ಚಿನ್ನದ ಪದಕ ವಿಜೇತರಾಗಿದ್ದರು. ಧ್ಯಾನಸ್ಥ ಭಂಗಿಯಲ್ಲಿ ಕುಳಿತಿರುವ ಮಹಾತ್ಮ ಗಾಂಧಿ ಮತ್ತು ಸಂಸತ್ತಿನ ಆವರಣದಲ್ಲಿ ಕುದುರೆಯ ಮೇಲೆ ಸವಾರಿ ಮಾಡುತ್ತಿರುವ ಛತ್ರಪತಿ ಶಿವಾಜಿ ಅವರ ಪ್ರತಿಮೆಗಳು ಅವರ ಅತ್ಯುತ್ತಮ ಸೃಷ್ಟಿಗಳಲ್ಲಿ ಸ್ಥಾನ ಪಡೆದಿವೆ. ಸುತಾರ್ ಅವರಿಗೆ ೧೯೯೯ ರಲ್ಲಿ ಪದ್ಮಶ್ರೀ, ೨೦೧೬ರಲ್ಲಿ ಪದ್ಮಭೂಷಣ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಯಿತು. ಇತ್ತೀಚೆಗೆ ಅವರಿಗೆ ಮಹಾರಾಷ್ಟ್ರದ ಅತ್ಯುನ್ನತ ಪ್ರಶಸ್ತಿಯಾದ ಮಹಾರಾಷ್ಟ್ರ ಭೂಷಣ ಪುರಸ್ಕಾರವನ್ನು ನೀಡಲಾಯಿತು.

ಸುತಾರ್ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಸೇರಿದಂತೆ ಹಲವು ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.

***************

ನೆದರ್ಲ್ಯಾಂಡ್ಸ್ ವಿದೇಶಾಂಗ ಸಚಿವ ಡೇವಿಡ್ ವ್ಯಾನ್ ವೀಲ್ ಇಂದು ನವದೆಹಲಿಯ ಸೌತ್ ಬ್ಲಾಕ್‌ನಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಭೇಟಿಯಾದರು.

ಭಾರತ-ನೆದರ್ಲ್ಯಾಂಡ್ಸ್ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಗಟ್ಟಿಗೊಳಿಸುವ ಮತ್ತು ವೈವಿಧ್ಯಗೊಳಿಸುವ ಕುರಿತು ಉಭಯ ನಾಯಕರು ಸಭೆ ನಡೆಸಿ ಒಪ್ಪಂದಗಳನ್ನು ವಿನಿಮಯ ಮಾಡಿಕೊಂಡರು. ಅವರು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರನ್ನು ಭೇಟಿ ಮಾಡುವ ನಿರೀಕ್ಷೆಯಿದೆ.

***************

ಸರ್ಕಾರವು ಇಂದು ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳಿಗೆ ಹೊಸ ಲಾಂಛನವನ್ನು ಅನಾವರಣಗೊಳಿಸಿದೆ. ಈ ಲಾಂಛನ ಪ್ರಗತಿ, ಪೋಷಣೆ ಮತ್ತು ಜ್ಞಾನೋದಯವನ್ನು ಸಂಕೇತಿಸುತ್ತದೆ, ಗ್ರಾಮೀಣ ಭಾರತಕ್ಕೆ ಸೇವೆ ಸಲ್ಲಿಸುವಲ್ಲಿ ಆರ್‌ಆರ್‌ಬಿಗಳ ಮೂಲ ಮೌಲ್ಯಗಳನ್ನು ಪ್ರತಿಬಿಂಬಿಸುತ್ತದೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ.

***************

ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ನಾಲ್ಕನೇ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯ ನಿನ್ನೆ ರಾತ್ರಿ ಲಕ್ನೋದ ಏಕಾನಾ ಕ್ರೀಡಾಂಗಣದಲ್ಲಿ ತೀವ್ರ ಮಂಜಿನಿಂದಾಗಿ ರದ್ದಾಗಿತ್ತು. ಐದನೇ ಮತ್ತು ಅಂತಿಮ ಪಂದ್ಯವು ನಾಳೆ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿದೆ.

*******ಮುಕ್ತಾಯ*******